# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 14ನೇ ಹಣಕಾಸು ಆಯೋಗ ಅನುದಾನದ ಕಾಮಗಾರಿಗಳ ಅನುಷ್ಠಾನಕ್ಕೆ ActionSoft ತಂತ್ರಾಂಶವನ್ನು ಹಾಗೂ mActionSoft Mobile App ನ್ನು ಬಳಸುವ ಕುರಿತು.

**ಓದಲಾಗಿದೆ:**
1. ಜಂಟಿ ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ ಇವರ ಅ.ಸ.ಪ.ಸಂ.N-19011(16)/3/2016-e-Panchayat,ದಿನಾಂಕ:07.05.2018.
2. ದಿನಾಂಕ:20.11.2018 ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಗಳು.

******

**ಪ್ರಸ್ತಾವನೆ:**

ಇಲಾಖೆಯಲ್ಲಿ ಅನುಷ್ಠಾನವಾಗುವ ಎಲ್ಲಾ ಕಾಮಗಾರಿಗಳ ಭೌತಿಕ ಮತ್ತು ಆರ್ಥಿಕ ಪ್ರಗತಿಯನ್ನು ಅಳವಡಿಸಲು ಹಾಗೂ ಮೇಲ್ವಿಚಾರಣೆ ಮಾಡಲು ಪ್ರಸ್ತುತ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸಲಾಗುತ್ತಿದ್ದು, ಓದಲಾದ (1) ರಲ್ಲಿ ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರು ಗ್ರಾಮ ಪಂಚಾಯತಿಗಳಿಂದ ಅನುಷ್ಠಾನವಾಗುವ 14ನೇ ಹಣಕಾಸು ಆಯೋಗದ ಅನುದಾನಕ್ಕೆ ಸಂಬಂಧಪಟ್ಟ ಕಾಮಗಾರಿಗಳ ಮಾಹಿತಿಯನ್ನು ActionSoft ತಂತ್ರಾಂಶದಲ್ಲಿ ಹಾಗು mActionSoft Mobile App ನಲ್ಲಿ ಅಳವಡಿಸುವುದನ್ನು ಕಡ್ಡಾಯಗೊಳಿಸಿರುತ್ತಾರೆ.

ಓದಲಾದ (2) ರಲ್ಲಿ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ ಇವರು 14ನೇ ಹಣಕಾಸು ಆಯೋಗ ಅನುದಾನದ ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಅಳವಡಿಸಲು ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ActionSoft ತಂತ್ರಾಂಶವನ್ನು ಹಾಗೂ ಸದರಿ ಕಾಮಗಾರಿಗಳನ್ನು Geotag ಮಾಡಲು mActionSoft Mobile app ನ್ನು ಬಳಸುವಂತೆ ಮತ್ತು ಗ್ರಾಮ ಪಂಚಾಯತಿಗಳಲ್ಲಿ 14ನೇ ಹಣಕಾಸು ಆಯೋಗದ ಅನುದಾನ ಹೊರತುಪಡಿಸಿ ಉಳಿದ ಇತರೆ ಯೋಜನೆಗಳಲ್ಲಿ ಅನುಷ್ಠಾನವಾಗುವ ಕಾಮಗಾರಿಗಳಿಗೆ ಪ್ರಗತಿಯನ್ನು ಅಳವಡಿಸಲು ಹಾಗೂ ಮೇಲ್ವಿಚಾರಣೆ ಮಾಡಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸುವಂತೆ ತಿಳಿಸಿರುತ್ತಾರೆ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ 14ನೇ ಹಣಕಾಸಿನ ಆಯೋಗ ಅನುದಾನದ ಮೇಲ್ವಿಚಾರಣೆಗೆ ಪಂಚತಂತ್ರ ತಂತ್ರಾಂಶವನ್ನು ಬಳಸಲಾಗುತ್ತಿದ್ದು, 2018-19ನೇ ಸಾಲಿನ 14ನೇ ಹಣಕಾಸು ಆಯೋಗದ ಅನುದಾನದ ಮೇಲ್ವಿಚಾರಣೆಗೆ ಕಡ್ಡಾಯವಾಗಿ PRIASoft ತಂತ್ರಾಂಶವನ್ನು ಬಳಸಲು ಹಾಗೂ ಅನುದಾನದ ವೆಚ್ಚ ಹಾಗೂ ಪಾವತಿಗಳನ್ನು PFMS ತಂತ್ರಾಂಶದ ಮೂಲಕವೇ ಮಾಡಲು ತಿಳಿಸಿರುತ್ತಾರೆ. ಅದರಂತೆ ಈ ಆದೇಶ:

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/36/ಗ.ಕೋಶ/2018, ಬೆಂಗಳೂರು, ದಿನಾಂಕ:31.12.2018.

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ 14ನೇ ಹಣಕಾಸು ಆಯೋಗ ಅನುದಾನದ ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಅಳವಡಿಸಲು ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ActionSoft ತಂತ್ರಾಂಶವನ್ನು ಹಾಗೂ ಸದರಿ ಕಾಮಗಾರಿಗಳನ್ನು Geotag ಮಾಡಲು mActionSoft Mobile app ನ್ನು ಬಳಸುವಂತೆ ಮತ್ತು ಗ್ರಾಮ ಪಂಚಾಯತಿಗಳಲ್ಲಿ 14ನೇ ಹಣಕಾಸು ಆಯೋಗದ ಅನುದಾನ ಹೊರತುಪಡಿಸಿ ಉಳಿದ ಯೋಜನೆಗಳಲ್ಲಿ ಅನುಷ್ಠಾನವಾಗುವ ಕಾಮಗಾರಿಗಳಿಗೆ ಪ್ರಗತಿಯನ್ನು ಅಳವಡಿಸಲು ಹಾಗೂ ಮೇಲ್ವಿಚಾರಣೆ ಮಾಡಲು

....2

ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸುವಂತೆ ಹಾಗೂ 2018–19ನೇ ಸಾಲಿನ 14ನೇ ಹಣಕಾಸು ಆಯೋಗದ ಅನುದಾನದ ಮೇಲ್ವಿಚಾರಣೆಗೆ ಕಡ್ಡಾಯವಾಗಿ PRIASoft ತಂತ್ರಾಂಶವನ್ನು ಬಳಸಲು ಹಾಗೂ ಅನುದಾನದ ವೆಚ್ಚ ಹಾಗೂ ಪಾವತಿಗಳನ್ನು PFMS ತಂತ್ರಾಂಶದ ಮೂಲಕವೇ ಮಾಡಲು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪ್ರಶಾಂತ್ ಕುಮಾರ್ ಮಿಶ್ರಾ, ಭಾ.ಆ.ಸೇ) 31/12
ನಿರ್ದೇಶಕರು(ಇ–ಆಡಳಿತ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯಲೆಕ್ಕಾಧಿಕಾರಿಗಳು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳು.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು.
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರು.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾಅಪ ಇಲಾಖೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾಅಪ ಇಲಾಖೆ, ಬೆಂಗಳೂರು.